# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಾರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಶುಕ್ರವಾರ, ದಿನಾಂಕ: 14ನೇ ಡಿಸೆಂಬರ್, 2018**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

******

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿ ಅವರು :-**

ಕರ್ನಾಟಕ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2018ನೇ ಸಾಲಿನ ರೈ ತಾಂತ್ರಿಕ ವಿಶ್ವವಿದ್ಯಾಲಯ ಬೆಂಗಳೂರು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುವುದು.

### 03. ವಿತ್ತೀಯ ಕಾರ್ಯಕಲಾಪ

**ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) ಅವರು:-**

(ಅ) 2018-19ನೇ ಸಾಲಿನ ರಾಜ್ಯ ಹಣಕಾಸಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಒಪ್ಪಿಸುವುದು.

(ಆ) ಭಾರತ ಸಂವಿಧಾನ 205(1)(ಎ)ರ ಅನುಚ್ಛೇದದ ಮೇರೆಗೆ 2018-19ನೇ ಸಾಲಿನ ಪೂರಕ ಅಂದಾಜುಗಳನ್ನು (ಮೊದಲನೇ ಕಂತನ್ನು) ಒಪ್ಪಿಸುವುದು.

## 04. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದಿಂದ ಉತ್ತರ

| | |
|---|---|
| ಶ್ರೀಯುತರುಗಳಾದ:<br>ಕೋಟ ಶ್ರೀನಿವಾಸ ಪೂಜಾರಿ,<br>ಮಾನ್ಯ ವಿರೋಧ ಪಕ್ಷದ ನಾಯಕರು<br>ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ,<br>ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು<br>ಹಾಗೂ ಮಾನ್ಯ ಸದಸ್ಯರುಗಳಾದ:<br>ಆಯನೂರು ಮಂಜುನಾಥ<br>ರಘುನಾಥ್‌ರಾವ್ ಮಲ್ಕಾಪೂರೆ<br>ಡಾ: ತೇಜಸ್ವಿನಿಗೌಡ ಹಾಗೂ<br>ಎನ್. ರವಿಕುಮಾರ್ | ರಾಜ್ಯದಲ್ಲಿ ಭೀಕರ ಬರಗಾಲ ಮತ್ತು ಈ ಸಂಬಂಧ ರೈತರು ಆತ್ಮಹತ್ಯೆಗೆ ಒಳಗಾಗುತ್ತಿರುವ ಬಗ್ಗೆ. |

## 05. ಸದಸ್ಯರುಗಳ ಖಾಸಗಿ ಕಾರ್ಯಕಲಾಪಗಳು

### ಸದಸ್ಯರ ಖಾಸಗಿ ವಿಧೇಯಕದ ಮಂಡನೆ

"ಕರ್ನಾಟಕ ಅಸಲು ಹಣಕ್ಕಿಂತ ಹೆಚ್ಚು ಬಡ್ಡಿ ವಿಧಿಸುವಿಕೆ ನಿಷೇಧ ವಿಧೇಯಕ" 2018:–

ಶ್ರೀ ಶರಣಪ್ಪ ಮಟ್ಟೂರ (ವಿಧಾನ ಪರಿಷತ್ತಿನ ಮಾನ್ಯ ಸದಸ್ಯರು) ಅವರು:–

ಅ) 2018ನೇ ಸಾಲಿನ "ಕರ್ನಾಟಕ ಅಸಲು ಹಣಕ್ಕಿಂತ ಹೆಚ್ಚು ಬಡ್ಡಿ ವಿಧಿಸುವಿಕೆ ನಿಷೇಧ ವಿಧೇಯಕ"ವನ್ನು ಮಂಡಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ (ಪ್ರ)

---